ಸಂರಕ್ಷಣೆ ಕಾಯ್ದೆ 1980ರ ಪ್ರಕಾರ ಅನುಮೋದನೆ ನೀಡಲು ಕಳುಹಿಸಿಕೊಡಲಾಗಿದೆ.

ಆ) ಅರಣ್ಯ ಜಮೀನಿನ ಬಿಡುಗಡೆ ಸಂಬಂಧಿಸಿದ ಪ್ರಸ್ತಾವನೆ ಸಿದ್ದಗೊಳಿಸುವ ಮುನ್ನ ಬೆಂಗಳೂರು ವೃತ್ತದ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ತುಮಕೂರು ಕಾರ್ಯನಿರ್ವಾಹಕ ಅಭಿಯಂತರರ ಮಧ್ಯ ಅಗತ್ಯ ಮಾಹಿತಿಗಳನ್ನು ಪಡೆಯಲು ಪತ್ರ ವ್ಯವಹಾರ ನಡೆದು ಪ್ರಸ್ತಾವನೆ ಸಿದ್ದಗೊಳಿಸಲು ವಿಳಂಬವಾಗಿರುತ್ತದೆ. ಸರ್ಕಾರಕ್ಕೆ ಪ್ರಸ್ತಾವನೆ ಬಂದ ನಂತರ ಮೇಲೆ ತಿಳಿಸಿದಂತೆ ಈಗಾಗಲೇ ಕ್ರಮ ತೆಗೆದುಕೊಳ್ಳಲಾಗಿದೆ.

ಇ) ಕೇಂದ್ರ ಸರ್ಕಾರದ ಅನುಮೋದನೆ ಬಂದ ನಂತರ ಕೆರೆ ನಿರ್ಮಾಣ ಕಾರ್ಯಕ್ರಮ ಹಾಕಿಕೊಳ್ಳಲಾಗುವುದು.

ಬೈಂದೂರು ಮತಕ್ಷೇತ್ರದಲ್ಲಿ ಶಾಲಾ ಕಟ್ಟಡಗಳು

881 - ಶ್ರೀ ಐ.ಎಂ. ಜಯರಾಮ್ ಶೆಟ್ಟಿ (ಬೈಂದೂರು) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೈಂದೂರು, ಮತ ಕ್ಷೇತ್ರದಲ್ಲಿ (ಕುಂದಾಪುರ ತಾ: ಶಿಕ್ಷಕರಿಲ್ಲದಂತಹ ಶಾಲೆಗಳ ಸಂಖ್ಯೆ ಎಷ್ಟು?

ಆ) ಸರ್ಕಾರವು ಇಂತಹ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು.

ಇ) ಹೆಚ್ಚುವರಿ ಶಾಲಾ ಕಟ್ಟಡಗಳ ಬಗ್ಗೆ ಅವಶ್ಯಕವಾಗಿರುವ ಶಾಲೆಗಳ ಸಂಖ್ಯೆ ಎಷ್ಟು;

ಈ) ಈ ಹೆಚ್ಚುವರಿ ಶಾಲಾ ಕಟ್ಟಡಗಳನ್ನು ನಿರ್ಮಿಸಲು ಸರ್ಕಾರ ಯಾವಾಗ ಕೈಗೆತ್ತಿಕೊಳ್ಳುವುದು?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) 36

ಈ) ಸದ್ಯದಲ್ಲಿ ಇಂತಹ ಕಟ್ಟಡಗಳನ್ನು ನಿರ್ಮಿಸಲಾಗುವುದು.

ಆಸ್ಪತ್ರೆಗಳ ಸಂದರ್ಶಕರ ಸಮಿತಿಯನ್ನು ಪುನರ್ ರಚಿಸುವುದು

883 - ಶ್ರೀ ಆರ್. ಕೃಷ್ಣಪ್ಪ (ಜಯಮಹಲ್) : ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರಿನ ವಿಕ್ಟೋರಿಯಾ, ಬೌರಿಂಗ್, ಕೆ.ಸಿ.ಜನರಲ್, ಮಿಂಟೋ ಹಾಗೂ ವಾಣಿ ವಿಲಾಸ್ ಆಸ್ಪತ್ರೆಗಳ ಸಂದರ್ಶಕರ ಸಮಿತಿಯನ್ನು ಪುನರ್ ರಚಿಸಲಾಗಿದೆಯೆ?

ಆ) ಇಲ್ಲದಿದ್ದಲ್ಲಿ ಯಾವಾಗ ಈ ಆಸ್ಪತ್ರೆಗಳ ಸಂದರ್ಶಕರ ಸಮಿತಿಗಳನ್ನು ಪುನರ್

ರಚಿಸಲಾಗುವುದು?

ಶ್ರೀ ಎ.ಬಿ. ಪಾಟೀಲ್ (ವೈದ್ಯಕೀಯ ಶಿಕ್ಷಣ ಸಚಿವರು) :

ಅ) ಇಲ್ಲ.

ಆ) ಕ್ರಮ ಕೈಗೊಳ್ಳಲಾಗುತ್ತಿದೆ.

ಬೆಂಗಳೂರು ನಗರದಲ್ಲಿ ಸರ್ಕಾರಿ ಹಾಗೂ ಅನುದಾನ ಪಡೆಯುತ್ತಿರುವ ಶಿಕ್ಷಣ ಸಂಸ್ಥೆಗಳಲ್ಲಿನ ಹುದ್ದೆಗಳ ಭರ್ತಿ

884 - ಶ್ರೀ ಆರ್. ಕೃಷ್ಣಪ್ಪ (ಜಯಮಹಲ್) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿರುವ ಸರ್ಕಾರಿ ಪ್ರಾಥಮಿಕ ಮಾಧ್ಯಮಿಕ ಹಾಗೂ ಪ್ರೌಢಶಾಲೆಗಳೆಷ್ಟು?

ಆ) ಬೆಂಗಳೂರು ನಗರದಲ್ಲಿರುವ ಅನುದಾನ ಪಡೆಯುತ್ತಿರುವ ಪ್ರಾಥಮಿಕ, ಮಾಧ್ಯಮಿಕ ಹಾಗೂ ಪ್ರೌಢಶಾಲೆಗಳೆಷ್ಟು?

ಇ) ಈ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆಎಷ್ಟು?

ಈ) ಸರ್ಕಾರಿ ಹಾಗೂ ಅನುದಾನ ಪಡೆಯುತ್ತಿರುವ ಪ್ರಾಥಮಿಕ, ಮಾಧ್ಯಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಖಾಲಿ ಇರತಕ್ಕ ಶಿಕ್ಷಕರ ಹುದ್ದೆಗಳೆಷ್ಟು?

ಉ) ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :

		ಪ್ರಾಥಮಿಕ ಶಾಲೆ	ಮಾಧ್ಯಮಿಕ ಶಾಲೆ	ಪ್ರೌಢ ಶಾಲೆ
ಅ)		644	573	064
ಆ)		91	256	232
ಇ)	ಸರ್ಕಾರಿ (ಪ್ರಾಥಮಿಕ ಮತ್ತು ಮಾಧ್ಯಮಿಕ)	254790		21547
	ಅನುದಾನಿತ (ಪ್ರಾಥಮಿಕ ಮತ್ತು ಮಾಧ್ಯಮಿಕ)	248472		94664
ಈ)	ಸರ್ಕಾರಿ (ಪ್ರಾಥಮಿಕ ಮತ್ತು ಮಾಧ್ಯಮಿಕ)	04		029
	ಅನುದಾನಿತ (ಪ್ರಾಥಮಿಕ ಮತ್ತು ಮಾಧ್ಯಮಿಕ)	(ಮಾಹಿತಿ ಲಭ್ಯವಿಲ್ಲ)		259

ಉ) ಸರ್ಕಾರಿ ಪ್ರಾಥಮಿಕ, ಮಾಧ್ಯಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ